# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಇ.ಸುರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇವರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ – ಆದೇಶ.

ಓದಲಾಗಿದೆ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಪತ್ರ ಸಂಖ್ಯೆ ಜಿಪಂ/ಆ(3)/ಸಿಎ/ಸಿಆರ್–26/ 2014–15 ದಿನಾಂಕ 23–05–2014.

2. ದೋಷಾರೋಪಣಾ ಪಟ್ಟಿಯೊಂದಿಗೆ ಜಾರಿ ಮಾಡಿದ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 50 ಇಎನ್‌ಕ್ಯೂ 2014 ದಿನಾಂಕ 01–09–2014.

3. ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 20–04–2015.

*****

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 23–05–2014ರ ಪತ್ರದ ಜೊತೆ ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಈ ಹಿಂದೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ 2012–13ನೇ ಸಾಲಿನಲ್ಲಿ ಬರಪರಿಹಾರ ಯೋಜನೆಯಡಿ ಹಿರಿಯೂರು ತಾಲ್ಲೂಕು, ಕಂದಿಕೆರೆ ಗ್ರಾಮದಲ್ಲಿ ಕಿರುನೀರು ಸರಬರಾಜು ಯೋಜನೆಯ ಪುನಶ್ಚೇತನ ಕಾಮಗಾರಿಗೆ ಮಂಜೂರಾದ ರೂ. 8.89 ಲಕ್ಷಗಳ ಅನುದಾನದಡಿ ಕಂದಿಕೆರೆ ಗ್ರಾಮದಲ್ಲಿ ಕೊಳವೆ ಬಾವಿಯನ್ನು ಕೊರೆದು, ಪ್ರತ್ಯೇಕವಾಗಿ 2 ಸಿಸ್ಟನ್‌ಗಳನ್ನು ಅಳವಡಿಸಿದಂತೆ ಬಿಲ್ಲನ್ನು ತಯಾರಿಸಿ ಪಾವತಿಸಲಾಗಿದೆಯೆಂದು, ಆದರೆ ವಿದ್ಯುತ್ ಸಂಪರ್ಕಕ್ಕಾಗಿ ಬೆಸ್ಕಾಂ ಇಲಾಖೆಗೆ ಅರ್ಜಿ ಸಲ್ಲಿಸದೆ ನಿರ್ಲಕ್ಷಿಸಿದ್ದು, ನಂತರದಲ್ಲಿ ಸದರಿ ಕೊರೆದ ಕೊಳವೆ ಬಾವಿಯು ಬತ್ತಿ ಹೋದ ಕಾರಣ ಕಾಮಗಾರಿಯು ನಿರರ್ಥಕವಾಗಿ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಸಮರ್ಪಕವಾಗಿ ಮಾಡಲು ಸಾಧ್ಯವಾಗದೇ ತೀವ್ರತರ ದುರ್ನಡತೆ ಎಸಗಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಲ್ಲಿಸಿದ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿದ್ದು, ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ಸದರಿಯವರಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 01–09–2014ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿಮಾಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಆಪಾದಿತರು ಮೇಲೆ ಕ್ರಮ ಸಂಖ್ಯೆ (3)ರಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧ ಮಾಡಲಾಗಿರುವ ಆರೋಪಗಳನ್ನು ಅಲ್ಲಗಳೆದಿದ್ದು, ತಮ್ಮನ್ನು ಆರೋಪಮುಕ್ತರೆಂದು ಘೋಷಿಸಬೇಕೆಂದು ಕೋರಿರುತ್ತಾರೆ.

----2

ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು 2012-13ನೇ ಸಾಲಿನಲ್ಲಿ ಕಿರುನೀರು ಸರಬರಾಜು ಯೋಜನೆಯಡಿ ಕಂದಿಕೆರೆ ಗ್ರಾಮದಲ್ಲಿ ಕೊರೆದ ಕೊಳವೆ ಬಾವಿಯು ನಿರರ್ಥಕವಾಗಲು ಕಾರಣರಾಗಿ ತೀವ್ರತರ ಕರ್ತವ್ಯಲೋಪವೆಸಗಿರುವ ಆರೋಪವು ಗಂಭೀರ ಸ್ವರೂಪದ್ದಾಗಿದ್ದು ಹಾಗೂ ಆರ್ಥಿಕ ನಷ್ಟದ ಪ್ರಸ್ತಾಪವಿರುವುದರಿಂದ ಸದರಿ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 50 ಇಎನ್‌ಕ್ಯೂ 2014 ಬೆಂಗಳೂರು, ದಿನಾಂಕ 21-07-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಇ.ಸುರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಕೆ. ರಾಜಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ತಾಂತ್ರಿಕ ಸಹಾಯಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ಸದರಿ ನಿಯಮಗಳ ನಿಯಮ 11(23) ರಂತೆ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಮಂಜೂರು ಮಾಡಲಾಗುವುದು.

ಇಲಾಖಾ ವಿಚಾರಣೆಗೆ ಅವಶ್ಯವಿರುವ ಸಿಬ್ಬಂದಿ, ಲೇಖನ ಸಾಮಗ್ರಿ ಮತ್ತು ಸ್ಥಳಾವಕಾಶ ಒದಗಿಸುವಂತೆ ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೂಜಾರ್‌ತಲಕಟ್ಟ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) /.(ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.

----3

6. ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು.
7. ಶ್ರೀ ಕೆ. ರಾಜಶೇಖರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ.72, 7ನೇ ಅಡ್ಡ ರಸ್ತೆ, 6ನೇ ಬ್ಲಾಕ್, 2ನೇ ಹಂತ, ನಾಗರಬಾವಿ ಹೊರ ವರ್ತುಲ ರಸ್ತೆ, ಬಿ.ಡಿ.ಎ. ಸಂಕೀರ್ಣದ ಎದುರು (ಅನ್ನಪೂರ್ಣೇಶ್ವರಿ ದೇವಸ್ಥಾನದ ಹತ್ತಿರ), ಬೆಂಗಳೂರು - 560072. (ದೂರವಾಣಿ ಸಂಖ್ಯೆ 080 - 23186590, ಮೊಬೈಲ್ ಸಂಖ್ಯೆ 9448883076).
8. ತಾಂತ್ರಿಕ ಸಹಾಯಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
9. ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ವಾಣಿ ವಿಲಾಸ ಸಾಗರ ಉಪ ವಿಭಾಗ, ಹಿರಿಯೂರು, ಚಿತ್ರದುರ್ಗ ಜಿಲ್ಲೆ.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
2. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
3. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ). ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
4. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.